ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೭ರ ಕರ್ನಾಟಕ ವ್ಯವಸಾಯ ಉತ್ಪನ್ನಗಳ ಮಾರಾಟ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಕೆ.ಬಿ. ಮಲ್ಲಪ್ಪ (ನಿಯಂತ್ರಿತ ಮಾರುಕಟ್ಟೆ ಮತ್ತು ಖುಷ್ಕಿ ಜಮೀನು ಅಭಿವೃದ್ಧಿ ರಾಜ್ಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ೧೯೮೭ರ ಕರ್ನಾಟಕ ವ್ಯವಸಾಯ ಉತ್ಪನ್ನಗಳ ಮಾರಾಟ (ನಿಯಂತ್ರಣ) (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.*

ಶ್ರೀ ಕೆ.ಬಿ. ಮಲ್ಲಪ್ಪ.—ಇದರಲ್ಲಿ ೧೯೫೬ ಎಂದು ಇದೆ. ಅದನ್ನು ತಿದ್ದುಪಡಿ ಮಾಡಬೇಕು. ೮೨ನೇ ಇಸವಿಯೆಂದು ಇರುವುದನ್ನು ೮೭ ಎಂದು ತಿದ್ದುಪಡಿ ಮಾಡಿಕೊಳ್ಳಬೇಕು.

(4) 1987ರ ಕರ್ನಾಟಕ ಮನೋರಂಜನಾ ತೆರಿಗೆಗಳು (4ನೇ ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ೧೯೮೭ರ ಕರ್ನಾಟಕ ಮನೋರಂಜನಾ ತೆರಿಗೆಗಳ (೪ನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾಪ ಏನೆಂದರೆ ''೧೯೮೭ರ ಕರ್ನಾಟಕ ಮನೋರಂಜನಾ ತೆರಿಗೆಗಳು (೪ನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ರಾಮಕೃಷ್ಣ ಹೆಗಡೆ (ಮುಖ್ಯ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ೧೯೮೭ರ ಕರ್ನಾಟಕ ಮನರಂಜನಾ ತೆರಿಗೆಗಳ (೪ನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು.—ವಿಧೇಯಕವನ್ನು ಮಂಡಿಸಲಾಗಿದೆ.*

(5) 1987ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕ

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಸಾರಿಗೆ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ೧೯೮೭ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು.—ಪ್ರಸ್ತಾವ ಏನೆಂದರೆ ''೧೯೮೭ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು''.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಸಾರಿಗೆ ಮಂತ್ರಿಗಳು).—ಮಾನ್ಯ ಅಧ್ಯಕ್ಷರೇ, ೧೯೮೭ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.